# ಕರ್ನಾಟಕ ಸರ್ಕಾರ

## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು

ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003

ಸಂಖ್ಯೆ: ಕ್ಯೂ5/ಕೆ.ಓ.ಎಸ್/ಪೂರಕ ಪರೀಕ್ಷೆ/ಆಗಸ್ಟ್-2022/37/2022-23 ದಿನಾಂಕ: 09-09-2022

**ಸುತ್ತೋಲೆ**

**ವಿಷಯ:** ಆಗಸ್ಟ್-2022 ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಆಗಸ್ಟ್-2022 ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಪೂರಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ: 12-09-2022 ರಂದು ಪೂರ್ವಾಹ್ನ 11:00 ಗಂಟೆಯ ನಂತರ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು ಹಾಗೂ ದಿನಾಂಕ:13-09-2022 ರಂದು ಸಂಬಂಧಿಸಿದ ಕಲಿಕಾ ಕೇಂದ್ರಗಳ ಲಾಗಿನ್‌ಗಳಲ್ಲಿ ಫಲಿತಾಂಶವನ್ನು ಲಭ್ಯಮಾಡಲಾಗುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ವಿಶೇಷ ಪರಿಸ್ಥಿತಿಯಲ್ಲಿ ಅಂದರೆ ಪರೀಕ್ಷೆಯ ದುರಾಚರಣೆ, ವಂಚನೆ, ಅನುಚಿತ ವರ್ತನೆ ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

**ಆಗಸ್ಟ್-2022 ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು, ಈ ಕೆಳಕಂಡ ಅಂಶಗಳ ಆಧಾರದ ಮೇಲೆ ನಿಮ್ಮ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಮತ್ತು ಇತರೆ ಅಂಶಗಳನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.**

1. ಆಗಸ್ಟ್-2022 ರ ಕೆ.ಓ.ಎಸ್ ಪೂರಕ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.

2. ಒಂದು ವೇಳೆ ಯಾವುದಾದರೂ **ಅಭ್ಯರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ, ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.** ಫಲಿತಾಂಶ ಪ್ರಕಟಣೆಯಾಗಿ 15 ದಿನಗಳ ನಂತರ ಈ ಬಗ್ಗೆ ಯಾವುದೇ ಕೋರಿಕೆ ಬಂದಲ್ಲಿ ಅದನ್ನು ಸ್ವೀಕರಿಸಲಾಗುವುದಿಲ್ಲ. ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಮುಖ್ಯಸ್ಥರೇ ಜವಾಬ್ದಾರರಾಗಿರುತ್ತಾರೆ.

3. ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ **ರೂ.200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ NEFT Challan ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.

4. ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೆ ಅಂತಿಮ ಎಂದು ಭಾವಿಸತಕ್ಕದ್ದು.

ಸದರಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾ ಪ್ರತಿಗಾಗಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ

| ವಿವರ | ದಿನಾಂಕ |
|---|---|
| ಆಗಸ್ಟ್–2022ರ ಕೆ.ಪಿ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 15-09-2022 |
| ಆಗಸ್ಟ್–2022ರ ಕೆ.ಪಿ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 20-09-2022 |
| ಆಗಸ್ಟ್–2022ರ ಕೆ.ಪಿ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 16-09-2022 |
| ಆಗಸ್ಟ್–2022ರ ಕೆ.ಪಿ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 21-09-2022 |

ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್‌ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರು ಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಸಂಸ್ಥೆಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳಿಗೆ ರವಾನಿಸಲಾಗುವುದು. ಮರುಎಣಿಕೆಯಲ್ಲಿ ಅಂಕಗಳ ವ್ಯತ್ಯಾಸವಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು ಹಾಗೂ ಮರುಮೌಲ್ಯಮಾಪನದಲ್ಲಿ 10 ಅಂಕಗಳಿಗಿಂತ ಹೆಚ್ಚು ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಅಭ್ಯರ್ಥಿಗಳಿಗೆ ಹಿಂದಿರುಗಿಸಲಾಗುವುದು.

ಸ್ಕ್ಯಾನ್‌ಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. **ಮರುಎಣಿಕೆ ಅಥವಾ ಮರುಮೌಲ್ಯಮಾಪನ ಸೇವೆಯನ್ನು ಪಡೆಯಬೇಕಾದಲ್ಲಿ ಸ್ಕ್ಯಾನ್‌ಪ್ರತಿಯನ್ನು ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ.** ಸ್ಕ್ಯಾನ್‌ಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ https://sslc.karnataka.gov.in ದಲ್ಲಿ ಲಭ್ಯವಿದ್ದು ಸದರಿ ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

**ಆನ್‌ಲೈನ್ ಮೂಲಕ ಶುಲ್ಕ ಪಾವತಿಸುವ ಬಗ್ಗೆ:**

ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ, ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ **DEBIT CARD, CREDIT CARD & NET BANKING** ಮೂಲಕ ಶುಲ್ಕ ಪಾವತಿಸಬಹುದಾಗಿದೆ.

ಮೇಲೆ ತಿಳಿಸಿರುವಂತೆ ಎಲ್ಲಾ ವಿಷಯಗಳ ಅಥವಾ ಅಪೇಕ್ಷಿತ ವಿಷಯದ ಸ್ಕ್ಯಾನ್‌ಪ್ರತಿ ಪಡೆದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಈ ಕೆಳಕಂಡಂತೆ ನಿಗದಿಪಡಿಸಿರುವ ನಿಗಧಿತ ಶುಲ್ಕದೊಡನೆ ಅರ್ಜಿ ಸಲ್ಲಿಸಬೇಕು. ನಿಗಧಿತ ದಿನಾಂಕದ ನಂತರ ಮರುಮೌಲ್ಯಮಾಪನಕ್ಕಾಗಿ ಬರುವ ಅರ್ಜಿಗಳು ಆನ್‌ಲೈನ್‌ನಲ್ಲಿ ಸ್ವೀಕೃತವಾಗುವುದಿಲ್ಲ. **ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಸಂಬಂಧ ಮಂಡಳಿಯ ಜಾಲತಾಣದಲ್ಲಿ ಫ್ಲೋ ಚಾರ್ಟ್‌ನ್ನು ಲಭ್ಯಮಾಡಲಾಗಿದೆ.**

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ. 500/- |
| ಮರುಮೌಲ್ಯಮಾಪನಕ್ಕೆ ಶುಲ್ಕ ಒಂದು ವಿಷಯಕ್ಕೆ | ರೂ. 800/- |
| ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆಗಾಗಿ (ಒಂದು ವಿಷಯಕ್ಕೆ) | ರೂ. 150/- |

ಛಾಯಾ ಪ್ರತಿಯನ್ನು ಭೌತಿಕವಾಗಿ ಅಂಚೆ ಮೂಲಕ ಅರ್ಜಿಯಲ್ಲಿ ನಮೂದಿಸಿದ ವಿಳಾಸಕ್ಕೆ ರವಾನಿಸುವ ಕಾರ್ಯವನ್ನು ಕೈಬಿಡಲಾಗಿದೆ. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲಾಗುವುದು. ಸ್ಕ್ಯಾನ್‌ಪ್ರತಿಗಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ಹಾಗೂ ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ ಅಪ್‌ಲೋಡ್ ಮಾಡಿರುವ ಬಗ್ಗೆ ಮಂಡಳಿ ಜಾಲತಾಣದಲ್ಲಿ **'click here to know status for scanned copy'** ಆಯ್ಕೆ ಮಾಡಿ ಪರಿಶೀಲಿಸಿಕೊಳ್ಳಬಹುದಾಗಿದೆ. ಹೀಗೆ ಅಪ್‌ಲೋಡ್ ಆದ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿಯನ್ನು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ ಅಪೇಕ್ಷಿಸಿದಲ್ಲಿ ಅಂಕಗಳ ಮರುಎಣಿಕೆ/ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ನಿಗಧಿತ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುವ ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆ ಅಥವಾ ಮರುಮೌಲ್ಯಮಾಪನದ ಪರಿಷ್ಕೃತ ಫಲಿತಾಂಶವನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗುವುದು. ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಕಲಿಕಾ ಕೇಂದ್ರಗಳಿಗೆ ಕಳುಹಿಸಲಾಗುವುದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಕೆ.ಓ.ಎಸ್ ಕಲಿಕಾ ಕೇಂದ್ರಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ. **ಆಗಸ್ಟ್-2022ರ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಪೂರಕ ಪರೀಕ್ಷೆಯ ಫಲಿತಾಂಶವನ್ನು** https://sslc.karnataka.gov.in **ಅಂತರ್ಜಾಲದಲ್ಲಿ ದಿನಾಂಕ:- 12/09/2022 ರಂದು ಪೂರ್ವಾಹ್ನ 11:00 ಗಂಟೆಯ ನಂತರ ಪ್ರಕಟಿಸಲಾಗುವುದು.**

12/9/2022

(ಗೋಪಾಲಕೃಷ್ಣ ಹೆಚ್.ಎನ್)
ನಿರ್ದೇಶಕರು
(ಪರೀಕ್ಷೆಗಳು)

ಪ್ರತಿಯನ್ನು:

1. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುತ್ತಾ, ಆಯಾ ಜಿಲ್ಲಾ ವ್ಯಾಪ್ತಿಗೆ ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಕಲಿಕಾ ಕೇಂದ್ರಗಳ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ಫಲಿತಾಂಶ ಪಟ್ಟಿ ಸಕಾಲದಲ್ಲಿ ಪಡೆದು ಪ್ರಕಟಿಸುವಂತೆ ಕ್ರಮವಹಿಸುವುದು.
2. ನಿರ್ದೇಶಕರು ಜೆ.ಎಸ್.ಎಸ್ ಕರ್ನಾಟಕ ಮುಕ್ತ ಶಾಲೆ ಮೈಸೂರು ಮತ್ತು ನಿರ್ದೇಶಕರು ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ ಬೆಂಗಳೂರು ಇವರ ಮಾಹಿತಿಗಾಗಿ.
3. ನಿರ್ದೇಶಕರು ಜೆ.ಎಸ್.ಎಸ್ ಕರ್ನಾಟಕ ಮುಕ್ತ ಶಾಲೆ ಮೈಸೂರು ಮತ್ತು ನಿರ್ದೇಶಕರು ಭಾರತ್ ಇನ್ಸ್ಟಿಟ್ಯೂಟ್ ಆಫ್ ಸ್ಕೂಲಿಂಗ್ ಎಜುಕೇಷನ್ ಬೆಂಗಳೂರು ಇವರ ಮೂಲಕ ರಾಜ್ಯದ ಎಲ್ಲಾ ಕೆ.ಓ.ಎಸ್ ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳಿಗೆ.
4. ಗಣಕ ಶಾಖೆ, ಇತರೆ ಪರೀಕ್ಷೆಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.
5. ಕಛೇರಿ ಪ್ರತಿ.

**KARNATAKA SECONDARY EDUCATION EXAMINATION BOARD (OTHER EXAMS)**
**6th Cross, Malleshwaram, Bengaluru – 560 003**

## FLOW CHART FOR ONLINE APPLICATION OF PHOTOCOPY, RETOTAL AND REVALUATION OF ANSWER SCRIPTS

www.sslc.karnataka.gov.in

↓

Click on ONLINE SERVICES

↓

Click on Other exams

↓

Click on Photocopy, Re totaling, Revaluation

↓

Click on Online Application for particular Exam

↓

Click on Application form for Scanned Copy

↓

Enter Exam Registration Number

↓

View

↓

Select Subjects for Scanned copy

↓

Enter Mobile Number

↓

Enter e-mail ID

↓

Enter Student Postal Address

↓

SUBMIT

↓

Challan Number will be displayed

(Note down Challan number for future reference)

↓

Click on Make Payment

↓

Select Online payment

(Credit Card, Debit Card, Net Banking.....)

↓

SUBMIT

↓

Pay Fee through Online

↓

**Print Acknowledgement**

**NOTE: 1**

1. Candidate can know the status of Photocopy Application by clicking on '**Click here to know status for scanned copy'** .
2. Candidate can change their registered Mobile number by using ' **Change Mobile Number'** option.

**NOTE 2. (RE TOTALING OF MARKS)**

1. Candidate can apply for **Retotaling of marks**, after getting Photocopy of Answer script by clicking **' Application for Retotaling'** in the Home page.
2. Candidate can know the status of Retotaling of marks of answer scripts by clicking on '**Click here to know status of Retotalling of marks of answer scripts.**

**NOTE 3. (Re Valuation of Answer scripts)**

1. Candidate can apply for Revaluation after getting Photocopy of Answer script by clicking ' **Application for Revaluation of answer scripts '** in the Home page.
2. Candidate can know the status of Revaluation of answer scripts by clicking on '**Click here to know status of Revaluation of answer scripts.**